ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

12

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 7/12/20

# ಸಭಾಪತಿ ವಿರುದ್ಧ ಅವಿಶ್ವಾಸ: ಜೆಡಿಎಸ್‌ಗೆ ಜಾತ್ಯತೀತ ಪರೀಕ್ಷೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 7/12/20

ನಮ್ಮದು ಜಾತ್ಯತೀತ ಪಕ್ಷ ಎಂದು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಪದೇ ಪದೇ ಹೇಳುತ್ತಾರೆ. ಬಿಜೆಪಿ ಸರ್ಕಾರ ವಿಧಾನಪರಿಷತ್ ಸಭಾಪತಿಗಳ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ಮುಂದಾಗಿದ್ದು, ಜೆಡಿಎಸ್ ಕೋಮುವಾದಿಗಳ ಪರ ನಿಲ್ಲುತ್ತದೆಯೋ ಇಲ್ಲವೋ ನೋಡುತ್ತೇವೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ತೀಕ್ಷ್ಣವಾಗಿ ಹೇಳಿದ್ದಾರೆ. ಹೀಗಾಗಿಯೇ ಪರಿಷತ್ತಿನ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರಿಗೆ ರಾಜೀನಾಮೆ ನೀಡದಂತೆ ಹೇಳಿದ್ದೇವೆ ಎಂದೂ ಅವರು ತಿಳಿಸಿದ್ದಾರೆ. ವಿಧಾನಮಂಡಲದ ಅಧಿವೇಶನದ ಹಿನ್ನೆಲೆಯಲ್ಲಿ ಭಾನುವಾರ ತಮ್ಮ ಅಧಿಕೃತ ನಿವಾಸದಲ್ಲಿ ಕಾಂಗ್ರೆಸ್ ಹಿರಿಯ ನಾಯಕರೊಂದಿಗೆ ಸಭೆ ನಡೆಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಜೆಡಿಎಸ್‌ನ ರಾಜಕೀಯ ವಿರೋಧಿ ಕಾಂಗ್ರೆಸ್ ಪಕ್ಷವೇ ಹೊರತು ಬಿಜೆಪಿ ಅಲ್ಲ. ಅವರು ಬಿಜೆಪಿ ಬಗ್ಗೆ ಸದಾಕಾಲ ಮೃದು ಧೋರಣೆ ಹೊಂದಿದ್ದಾರೆ. ಇದೇ ಕಾರಣಕ್ಕೆ ಜೆಡಿಎಸ್ ಪಕ್ಷವನ್ನು ಬಿಜೆಪಿಯ 'ಬಿ-ಟೀಂ' ಎನ್ನುವುದು ಎಂದರು.

# ಸಭಾಪತಿ ವಿರುದ್ಧ ಅವಿಶ್ವಾಸ: ಬಿಜೆಪಿಗೆ ಬೆಂಬಲ ಬಗ್ಗೆ ಇಂದು ಜೆಡಿಎಸ್ ನಿರ್ಧಾರ

ಧಾರವಾಡ: ವಿಧಾನಪರಿಷತ್ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ವಿಚಾರದಲ್ಲಿ ಬಿಜೆಪಿಗೆ ಜೆಡಿಎಸ್ ಬೆಂಬಲ ನೀಡುವ ಕುರಿತು ಸೋಮವಾರ ಪಕ್ಷದ ಸಭೆ ನಡೆಯಲಿದ್ದು, ಅಲ್ಲೇ ವರಿಷ್ಠರು ಅಂತಿಮ ತೀರ್ಮಾನ ಕೈಗೊಳ್ಳುತ್ತಾರೆ ಎಂದು ಮಾಜಿ ಸಚಿವ ಬಸವರಾಜ ಹೊರಟ್ಟಿ ಹೇಳಿದರು. ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿ, ವಿಧಾನಪರಿಷತ್‌ನಲ್ಲಿ ನಾವು ಬೆಂಬಲ ನೀಡಿದವರು ಸಭಾಪತಿ ಆಗುತ್ತಾರೆ. ನಾವು 14 ಜನರಿದ್ದೇವೆ. ಹಾಲಿ ಸಭಾಪತಿ ವಿರುದ್ಧ 12 ಮಂದಿ ಅವಿಶ್ವಾಸ ಮಂಡಿಸಿದ್ದಾರೆ. ಬುಧವಾರ ಸದನದಲ್ಲಿ ಈ ಬಗ್ಗೆ ಚರ್ಚೆ ಆಗಬಹುದು. ಸದ್ಯದ ಸ್ಥಿತಿಯಲ್ಲಿ ಜೆಡಿಎಸ್ ಕಾಂಗ್ರೆಸ್‌ಗೆ ಬೆಂಬಲ ನೀಡುವ ಪ್ರಶ್ನೆಯೇ ಇಲ್ಲ ಎಂದರು.